ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 30-5-2020

# ರಾಜ್ಯಸಭಾ ಸದಸ್ಯ ವೀರೇಂದ್ರ ಕುಮಾರ್ ವಿಧಿವಶ

ಉ. ವಾ. 30-5-2020

## ರಾಷ್ಟ್ರಪತಿ, ಪ್ರಧಾನಿ ಮೋದಿ ಸೇರಿ ಗಣ್ಯರ ಸಂತಾಪ | ಎರಡು ಬಾರಿ ಲೋಕಸಭೆಗೆ ಆಯ್ಕೆ

**ತಿರುವನಂತಪುರ/ನವದೆಹಲಿ:** ರಾಜ್ಯಸಭಾ ಸದಸ್ಯ, ಮಲಯಾಳಂ ದಿನ ಪತ್ರಿಕೆ 'ಮಾತೃಭೂಮಿ' ವ್ಯವಸ್ಥಾಪಕ ನಿರ್ದೇಶಕ ಎಂ.ಪಿ. ವೀರೇಂದ್ರ ಕುಮಾರ್ (84) ಗುರುವಾರ ತಡರಾತ್ರಿ ನಿಧನರಾಗಿದ್ದಾರೆ. ಅವರು ಪತ್ನಿ, ಮೂವರು ಪುತ್ರಿಯರು, ಮಾತೃಭೂಮಿ ಸಮೂಹ ಸಂಸ್ಥೆಗಳ ಜಂಟಿ ವ್ಯವಸ್ಥಾಪಕ ನಿರ್ದೇಶಕ, ಪುತ್ರ ಎಂ.ವಿ.ಶ್ರೇಯಮ್ಸ್ ಕುಮಾರ್ ಅವರನ್ನು ಅಗಲಿದ್ದಾರೆ. ಶುಕ್ರವಾರ ಕಲ್ಪೆಟ್ಟಾದಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಅವರ ಅಂತ್ಯಸಂಸ್ಕಾರ ನೆರವೇರಿಸಲಾಯಿತು.

ಕೇರಳದ ಧೀಮಂತ ರಾಜಕಾರಣಿಯಾಗಿದ್ದ ಅವರು 1997ರಲ್ಲಿ ಕೇಂದ್ರ ಹಣಕಾಸು ಖಾತೆ ಮತ್ತು ಕಾರ್ಮಿಕ ಖಾತೆ ಸಹಾಯಕ ಸಚಿವರಾಗಿಯೂ ಕಾರ್ಯನಿರ್ವಹಿಸಿದ್ದರು. ತುರ್ತು ಪರಿಸ್ಥಿತಿ ವೇಳೆ ಜೈಲು ವಾಸ ಅನುಭವಿಸಿದ್ದರು. ಈ ವೇಳೆ ಜನತಾ ಪಾರ್ಟಿ ಸ್ಥಾಪಿಸುವಲ್ಲಿ ವೀರೇಂದ್ರ ಕುಮಾರ್ ಪ್ರಮುಖ ಪಾತ್ರ ವಹಿಸಿದ್ದರು. ಕಲ್ಲಿಕೋಟೆ ಲೋಕಸಭಾ ಕ್ಷೇತ್ರದಿಂದ 1996 ಹಾಗೂ 2004ರಲ್ಲಿ ಸಂಸತ್‌ಗೆ ಆಯ್ಕೆಯಾಗಿದ್ದರು. 1987ರಲ್ಲಿ ಮುಖ್ಯಮಂತ್ರಿಯಾಗಿದ್ದ ಇ.ಕೆ. ನಾಯನಾರ್ ನೇತೃತ್ವದ ಎಲ್‌ಡಿಎಫ್ ಸರ್ಕಾರದಲ್ಲಿ ಅರಣ್ಯ ಸಚಿವರಾಗಿದ್ದ ಅವರು ಕೆಲ ಭಿನ್ನಾಭಿಪ್ರಾಯದಿಂದ 48 ಗಂಟೆಗಳ ಅವಧಿಯಲ್ಲಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.



ಆರಂಭದಲ್ಲಿ ಸಿಪಿಎಂ ನೇತೃತ್ವದ ಎಲ್‌ಡಿಎಫ್ ಜತೆಗೆ ಇದ್ದ ಅವರು, 2009ರಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್‌ಗೆ ಸೇರ್ಪಡೆಯಾದರು. ಅವರು ಸುದ್ದಿ ಸಂಸ್ಥೆ 'ಪಿಟಿಐ' ನಿರ್ದೇಶಕರಾಗಿದ್ದರು. ಜತೆಗೆ ಇಂಡಿಯನ್ ನ್ಯೂಸ್‌ಪೇಪರ್ . ಸೊಸೈಟಿ ಜತೆಗೆ ಗುರುತಿಸಿಕೊಂಡಿದ್ದರು.

ರಾಜಕೀಯ, ಅರ್ಥಶಾಸ್ತ್ರ ತತ್ವಶಾಸ್ತ್ರಗಳಲ್ಲಿ ಹಲವು ಪುಸ್ತಕಗಳನ್ನೂ ಬರೆದಿದ್ದಾರೆ. ಅವರು ಬರೆದ 'ಹೈಮವತ ಭೂವಿಲ್' ಕೃತಿಗೆ 2010ರಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಬಂದಿತ್ತು.

**ಜನನ, ವಿದ್ಯಾಭ್ಯಾಸ:** ವಯನಾಡ್ ಜಿಲ್ಲೆಯ ಕಲ್ಪೆಟ್ಟಾದಲ್ಲಿ ಸಮಾಜವಾದಿ ನಾಯಕರಾಗಿದ್ದ ಎಂ.ಕೆ.ಪದ್ಮಪ್ರಭ ಗೌಡರ್ ಮತ್ತು ಮರುದೇವಿ ಅವ್ವ ಅವರ ಪುತ್ರನಾಗಿ 1932ರ ಜು.22ರಂದು ವೀರೇಂದ್ರ ಕುಮಾರ್ ಜನಿಸಿದರು. ಕಲ್ಪೆಟ್ಟಾ ಮತ್ತು ಕಲ್ಲಿಕೋಟೆಯಲ್ಲಿ ಪ್ರಾಥಮಿಕ ಶಿಕ್ಷಣ ಪಡೆದು, ಚೆನ್ನೈನಲ್ಲಿ ತತ್ವಶಾಸ್ತ್ರದಲ್ಲಿ ಸ್ನಾತಕೋತ್ತರ ಪದವಿ ಪಡೆದರು. ಅಮೆರಿಕದ ಸಿನ್ಸಿನಾಟಿ ವಿವಿಯಿಂದ ಎಂಬಿಎ ಪದವಿ ಪಡೆದಿದ್ದರು.

**ಗಣ್ಯರ ಸಂತಾಪ:** ವೀರೇಂದ್ರ ಕುಮಾರ್ ನಿಧನಕ್ಕೆ ರಾಷ್ಟ್ರಪತಿ ರಾಮನಾಥ ಕೋವಿಂದ್, ಉಪರಾಷ್ಟ್ರಪತಿ ಎಂ.ವೆಂಕಯ್ಯ ನಾಯ್ಡು, ಪ್ರಧಾನಿ ನರೇಂದ್ರ ಮೋದಿ, ಮಾಜಿ ಪ್ರಧಾನಿ ದೇವೇಗೌಡ, ಕೇಂದ್ರ ಸಚಿವ ಪ್ರಕಾಶ್ ಜಾವಡೇಕರ್, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಕೇರಳ ಸಿಎಂ ಪಿಣರಾಯಿ ವಿಜಯನ್ ಮತ್ತಿತರರು ಸಂತಾಪ ಸೂಚಿಸಿದ್ದಾರೆ.